1466ಧಿಕೃತ
ವಿ-330
ತ್ರ-16
ಕೌಶಲ್ಯಾಭಿವೃದ್ಧಿ

**ವಿಧಾನಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 330 ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಹೇಳಿಕೆ**

| | |
|---|---|
| ವಿಷಯ: | ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಶ್ರೀ ಥಾಮಸ್ ನೇತೃತ್ವದ ವರದಿಯಲ್ಲಿನ ಶಿಫಾರಸ್ಸನ್ನು ಸಚಿವ ಸಂಪುಟದಲ್ಲಿ ಒಪ್ಪಿಕೊಂಡು ಇತರೆ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ನೀಡಿರುವಂತೆ ಶೇಕಡಾ 100 ರಷ್ಟು ವೇತನಾನುದಾನ, ಪಿಂಚಣಿ ಮತ್ತು ನಿವೃತ್ತಿ ಸೌಲಭ್ಯಗಳು, ಸೇವಾ ಸೌಲಭ್ಯಗಳು ಹಾಗೂ ಸೇವಾ ನಿಯಮಗಳನ್ನು (ಅನುದಾನ ಸಂಹಿತೆ) ನೀಡಲು ಡಿಸೆಂಬರ್ 2014ರಲ್ಲಿ ಜಾರಿಗೊಳಿಸಲು ಆದೇಶಿಸಲಾಗಿದೆ. ಸೇವಾ ನಿಯಮಗಳನ್ನು ರೂಪಿಸುತ್ತಿರುವುದಾಗಿ ಹಲವಾರು ಬಾರಿ ಸದನದಲ್ಲಿ ಚರ್ಚೆಯಾಗಿ ಉತ್ತರ ನೀಡಿದ್ದರು ಸಹ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿಗಳ ನಿಧಾನಧೋರಣೆಯಿಂದ, ನಿರ್ಲಕ್ಷ್ಯತನದಿಂದ ಇದುವರೆವಿಗೂ ನಿಯಮಗಳನ್ನು ರೂಪಿಸಿರುವುದಿಲ್ಲ. ಆದ್ದರಿಂದ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿಗಳ ಮೇಲೆ ಕ್ರಮ ಕೈಗೊಂಡು ನೆನೆಗುದಿಗೆ ಬಿದ್ದಿರುವ ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ನೌಕರರಿಗೆ ಇತರೆ ಅನುದಾನಿತ ನೌಕರರುಗಳ ನೀಡಿರುವ ಎಲ್ಲಾ ಸೌಲಭ್ಯಗಳನ್ನು ಮಂಜೂರು ಮಾಡಿ ಆದೇಶ ಹೊರಡಿಸಬೇಕೆಂಬ ವಿಷಯವನ್ನು ಸದನದಲ್ಲಿ ನಿಯಮ 330ರಲ್ಲಿ ಮಾನ್ಯ ಉನ್ನತ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರಲ್ಲಿ ಪ್ರಸ್ತಾಪಿಸುತ್ತೇನೆ. |

*******

ಪ್ರೊ. ಪಿ.ಎಸ್.ಎಸ್.ಥಾಮಸ್ ವರದಿಯ ಶಿಫಾರಸ್ಸುಗಳನ್ನು ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಅನುಷ್ಠಾನಗೊಳಿಸುವ ಸಂಬಂಧ ಹಾಲಿ ಚಾಲ್ತಿಯಲ್ಲಿರುವ 1997 ರ ಅನುದಾನ ಸಂಹಿತೆಯನ್ನು ಪರಿಷ್ಕರಿಸಲಾಗುತ್ತಿದ್ದು, ನಿಯಮಾವಳಿಗಳು ಪರಿಶೀಲನೆ ಅಂತಿಮ ಹಂತದಲ್ಲಿರುತ್ತದೆ. ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಸಿಬ್ಬಂದಿಗೆ ನೀಡಬಹುದಾದ ಅರ್ಹ ಸೇವಾ ಸೌಲಭ್ಯಗಳನ್ನು, ನಿಯಮಾವಳಿಗಳನ್ನು ಜಾರಿಗೆ ತರುವುದರ ಮೂಲಕ ಒದಗಿಸಲು ಕ್ರಮವಹಿಸಲಾಗುವುದು.

* * * *

**ಕೌಉಜೀಇ 7 ಕೈತಪ್ರ 2022**

(ಡಾ.ಸಿ.ಎನ್.ಅಶ್ವತ್ಥ ನಾರಾಯಣ)
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು